## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2020-21ನೇ ಸಾಲಿನಲ್ಲಿ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದಲ್ಲಿ ಅನುಷ್ಠಾನಗೊಳಿಸುತ್ತಿರುವ ಸ್ವಯಂ ಉದ್ಯೋಗ ಸಾಲ ಯೋಜನೆ, ಅರಿವು ಶೈಕ್ಷಣಿಕ ಸಾಲ ಹಾಗೂ ಅರಿವು ನವೀಕರಣ ಯೋಜನೆಗಳಿಗೆ ಅನುದಾನವನ್ನು ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:-**

1. ವ್ಯವಸ್ಥಾಪಕ ನಿರ್ದೇಶಕರು, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ, ನಿಅಚೌಅ/ಆ,ವ್ಯ/ಸಿಆರ್-94/2020-21 ದಿನಾಂಕ::04.01.2022.
2. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ :ಆಇ 309 ಬಿಆರ್ಎಸ್ 2021 ದಿನಾಂಕ:02.02.2022.

*********

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಸಂಖ್ಯೆ(1) ರ ಪ್ರಸ್ತಾವನೆಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ ಇವರು 2020-21ನೇ ಸಾಲಿನಲ್ಲಿ ನಿಗಮಕ್ಕೆ ಆಯವ್ಯಯದಲ್ಲಿ ರೂ.10.00 ಕೋಟಿಗಳನ್ನು ಒದಗಿಸಲಾಗಿದ್ದು, ಅದರಂತೆ ಕ್ರಿಯಾ ಯೋಜನೆಯನ್ನು ಸಿದ್ದಪಡಿಸಿ, 2021-21 ನೇ ಸಾಲಿನ ಸಹಾಯಧನ ಲೆಕ್ಕಶೀರ್ಷಿಕೆ:2225-03-190-0-07 ರಲ್ಲಿ ಬಿಡುಗಡೆ ಮಾಡಲಾಗಿರುವ ಹಾಗೂ ನಿಗಮದಲ್ಲಿ ಲಭ್ಯವಿರುವ ಅನುದಾನ ರೂ.401.66 ಲಕ್ಷಗಳನ್ನು ಸರ್ಕಾರಕ್ಕೆ ಹಿಂದಿರುಗಿಸಿದಲ್ಲಿ ಅದೇ ಮೊತ್ತದ ಅನುದಾನವನ್ನು ಬಂಡವಾಳ ಲೆಕ್ಕಶೀರ್ಷಿಕೆ:4225-03-190-0-07 ಹೆಚ್ಚುವರಿಯಾಗಿ ಒದಗಿಸಲು ಕೋರಿದ್ದು, ಅದರಂತೆ ಷೇರು ಬಂಡವಾಳ ಲೆಕ್ಕಶೀರ್ಷಿಕೆಯಡಿ ಸ್ವಯಂ ಉದ್ಯೋಗ ಮತ್ತು ಅರಿವು ಶೈಕ್ಷಣಿಕ ಸಾಲ ಯೋಜನೆಗಳಿಗೆ ಅನುದಾನದ ಅವಶ್ಯಕತೆ ಇರುವುದರಿಂದ 2020-21ನೇ ಸಾಲಿಗೆ ಷೇರು ಬಂಡವಾಳ ಲೆಕ್ಕಶೀರ್ಷಿಕೆ:4225-03-190-0-07 ರಡಿ ಬಿಡುಗಡೆಗೊಳಿಸಬೇಕಾಗಿರುವ ಬಾಕಿ ಮೊತ್ತ ರೂ.400.00 ಲಕ್ಷಗಳನ್ನು ಹಾಗೂ ಉಳಿಕೆ ಮೊತ್ತ ರೂ.587.00 ಲಕ್ಷಗಳನ್ನು ವಿಶೇಷ ಅನುದಾನದಡಿಯಲ್ಲಿ ಸೇರಿಸಿ, ಒಟ್ಟು ಮೊತ್ತ ರೂ.987.00 ಲಕ್ಷಗಳ ಅನುದಾನವನ್ನು ಬಿಡುಗಡೆಗೊಳಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮಸಂಖ್ಯೆ:(2) ರ ಆರ್ಥಿಕ ಇಲಾಖೆಯ ಆದೇಶದಲ್ಲಿ ಲೆಕ್ಕಶೀರ್ಷಿಕೆ:4225-03-190-0-07 ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ 211 ಬಂಡವಾಳ ಹೂಡಿಕೆ ರಡಿ ರೂ.400.00 ಲಕ್ಷಗಳನ್ನು ಹೆಚ್ಚುವರಿಯಾಗಿ ಒದಗಿಸಿ, ಆದೇಶ ಹೊರಡಿಸಿದ್ದು, ಉಳಿದ ರೂ.5.87 ಕೋಟಿ ಹೆಚ್ಚುವರಿ ಅನುದಾನ ಒದಗಿಸಲು ಸಾಧ್ಯವಿಲ್ಲ. ಆದ್ದರಿಂದ 2020-21ನೇ ಸಾಲಿನ ಕ್ರಿಯಾ ಯೋಜನೆಯನ್ನು ರೂ.4.00 ಕೋಟಿಗಳಿಗೆ ಸೀಮಿತಿಗೊಳಿಸಿ ಅನುಷ್ಠಾನಗೊಳಿಸುವಂತೆ ತಿಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 393 ಬಿಎಂಎಸ್ 2021, ಬೆಂಗಳೂರು, ದಿನಾಂಕ: 07-02-2022

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತದಲ್ಲಿ 2020-21ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಸ್ವಯಂ ಉದ್ಯೋಗ ಸಾಲ ಯೋಜನೆ ಹಾಗೂ ಅರಿವು ಶೈಕ್ಷಣಿಕ ಸಾಲ ಮತ್ತು ಅರಿವು ನವೀಕರಣ ಯೋಜನೆಗಳಿಗೆ

----2

ಲೆಕ್ಕಶೀರ್ಷಿಕೆ:4225-03-190-0-07 ರಡಿ ರೂ.325.00 ಲಕ್ಷಗಳನ್ನು ಬಿಡುಗಡೆ ಮಾಡಿ ಆದೇಶಿಸಿದೆ. ವ್ಯವಸ್ಥಾಪಕ ನಿರ್ದೇಶಕರು, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ ರವರು ಯೋಜನೆಯ ಮಾರ್ಗಸೂಚಿಗಳ ಅನುಸಾರ ಅನುದಾನದ ಸದ್ಬಳಕೆಗಾಗಿ ನಿಯಮಾನುಸಾರ ಕ್ರಮ ತೆಗೆದುಕೊಳ್ಳುವುದು. ಬಳಕೆಯ ವಿವರಗಳನ್ನು ಜಿಲ್ಲಾವಾರು, ತಾಲ್ಲೂಕುವಾರು ನಿಗಮದ ಜಾಲತಾಣದಲ್ಲಿ ಅಳವಡಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 397 ವೆಚ್ಚ-3/2022 ದಿನಾಂಕ:04.02.2022 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹಾಗೂ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

V. Akkamahadevi 07/2/22

(ವಿ. ಅಕ್ಕಮಹಾದೇವಿ )
ಸರ್ಕಾರದ ಅಧೀನ ಕಾರ್ಯದರ್ಶಿ-1
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ.
4. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಸಚಿವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಧಾನಸೌಧ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ , ವಿಕಾಸ ಸೌಧ ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

***********

# ಕರ್ನಾಟಕ ಸರ್ಕಾರ

ಸಂ:ಹಿಂವಕ **393** ಬಿಎಂಎಸ್ **2021**

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:**09.02.2022**

## ಸೇರ್ಪಡೆ

ಸರ್ಕಾರದ ಆದೇಶ ಸಂಖ್ಯೆ: ಹಿಂವಕ 393 ಬಿಎಂಎಸ್ 2021 ದಿನಾಂಕ:07.02.2022 ರಲ್ಲಿ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತದಿಂದ 2020-21ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಸ್ವಯಂ ಉದ್ಯೋಗ ಸಾಲ ಯೋಜನೆ ಹಾಗೂ ಅರಿವು ಶೈಕ್ಷಣಿಕ ಸಾಲ ಮತ್ತು ಅರಿವು ನವೀಕರಣ ಯೋಜನೆಗಳಿಗೆ ಲೆಕ್ಕಶೀರ್ಷಿಕೆ:4225-03-190-0-07 ಆಬ್ಜೆಕ್ಟೀವ್ ಕೋಡ್-211 ರಡಿ ರೂ.325.00 ಲಕ್ಷಗಳನ್ನು ಬಿಡುಗಡೆ ಮಾಡಿ ಆದೇಶಿಸಿದ್ದು, ಸದರಿ ಆದೇಶದಲ್ಲಿ ಈ ಕೆಳಕಂಡ ಷರತ್ತುಗಳನ್ನು ಸೇರ್ಪಡೆಗೊಳಿಸಿದ್ದು, ಅದರಂತೆ ಓದಿಕೊಳ್ಳತಕ್ಕದ್ದು.

**ಷರತ್ತುಗಳು:-**

1. ವ್ಯವಸ್ಥಾಪಕ ನಿರ್ದೇಶಕರು, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ ಇವರು ಹಣ ಡ್ರಾ ಮಾಡಲು ಸಲ್ಲಿಸುವ ಸಂಬಂಧಿಸಿದ ಲೆಕ್ಕಶೀರ್ಷಿಕೆವಾರು ಸ್ವೀಕರ್ತನ ರಸೀದಿ ಬಿಲ್ಲುಗಳಿಗೆ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಮೇಲು ರುಜು ಪಡೆದು, ಹಣ ಡ್ರಾ ಮಾಡತಕ್ಕದ್ದು.
2. ಸರ್ಕಾರದ ಆದೇಶದಲ್ಲಿ ಯೋಜನೆಗಳಿಗೆ ಮಂಜೂರು ಮಾಡಿರುವ ಅನುದಾನ ಬಿಡುಗಡೆ ಕುರಿತಂತೆ ಕಾಲಕಾಲಕ್ಕೆ ಹೊರಡಿಸಲಾಗಿರುವ ಮಾರ್ಗಸೂಚಿಗಳನ್ವಯ ನಿಯಮಾನುಸಾರ ಕ್ರಮವಹಿಸತಕ್ಕದ್ದು.
3. ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಯೋಜನೆಗಳಿಗೆ ಸಂಬಂಧಿಸಿದಂತೆ 2020-21 ನೇ ಸಾಲಿನ ಅನುಮೋದಿತ ಕ್ರಿಯಾ ಯೋಜನೆಯಂತೆ ನಿಯಮಾನುಸಾರ ಅನುದಾನ ಉಪಯೋಗಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

V. Akkamahadevi 09/02/22

**(ವಿ. ಅಕ್ಕಮಹಾದೇವಿ )**
ಸರ್ಕಾರದ ಅಧೀನ ಕಾರ್ಯದರ್ಶಿ-1
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ.
4. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.